# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE 24/3/2020

## ಜನತಾ ಕರ್ಫ್ಯೂ ಯಶಸ್ಸಿಗೆ ಸ್ಪೀಕರ್ ಕಾಗೇರಿ ಅಭಿನಂದನೆ

24-3-2020



ವಿಧಾನಸಭೆ: ಕೊರೋನಾ ವೈರಸ್ ವಿರುದ್ಧ ಹೋರಾಡಲು ಪ್ರಧಾನಿ ಮೋದಿ ಕರೆ ನೀಡಿದ್ದ ಜನತಾ ಕರ್ಫ್ಯೂಗೆ ಭಾರೀ ಬೆಂಬಲ ನೀಡಿದ ನಾಡಿನ ಜನತೆಗೆ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅಭಿನಂದಿಸಿದ್ದಾರೆ. ಸೋಮವಾರ ಸದನ ಆರಂಭವಾಗುತ್ತಿದ್ದಂತೆ ಸಭಾಧ್ಯಕ್ಷರು, ಜನತಾ ಕರ್ಫ್ಯೂಗೆ ಅಭೂತಪೂರ್ವ ಸ್ಪಂದನೆ ಸಿಕ್ಕಿದೆ. ದೇಶದಲ್ಲಿ ವೈರಸ್ ಹರಡಿರುವುದಕ್ಕೆ ಆತಂಕದ ವಾತಾರಣ ಸೃಷ್ಟಿಯಾಗಿದೆ. ಕೊರೋನಾ ತಡೆಯಲು ಪ್ರಧಾನಿ ಕರೆಗೆ ಓಗೊಟ್ಟು ರಾಜ್ಯದ ಜನ ಜನತಾ ಕರ್ಫ್ಯೂವನ್ನು ಬೆಂಬಲಿಸಿ ಯಶಸ್ವಿಗೊಳಿಸಿದ್ದಾರೆ ಎಂದು ಹೇಳಿದರು.

ಕೊರೋನಾ ನಿಯಂತ್ರಣಕ್ಕೆ ಕೇಂದ್ರ, ರಾಜ್ಯ ಸರ್ಕಾರಗಳು ಕೈಗೊಳ್ಳುವ ನಿರ್ಧಾರಕ್ಕೆ ಜನ ಕೈ ಜೋಡಿಸಬೇಕು. ಮುಂದಿನ ದಿನದಲ್ಲಿ ರಾಜ್ಯ ಸರ್ಕಾರ ಮತ್ತಷ್ಟು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.